ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1768 (2010)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್.ಬಿ. ತಿಮ್ಮಾಪೂರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮಾನ್ಯ ಸಮಾಜ ಕಲ್ಯಾಣ ಸಚಿವರು

ವಿಷಯ : ಕುಲಕಸುಬುದಾರರಿಗೆ ಆರ್ಥಿಕ ಚೈತನ್ಯ ನೀಡುವ ಬಗ್ಗೆ

(ಅ) ರಾಜ್ಯದಲ್ಲಿ ಕುಲಕಸುಬನ್ನೇ ಆಧರಿಸಿ ಜೀವನ ಸಾಗಿಸುತ್ತಾ ಬಂದಿದ್ದ ವರ್ಗಗಳಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕುಲಕಸುಬುದಾರರು ಇಂದು ಪರ್ಯಾಯ ಉದ್ಯೋಗದಲ್ಲಿ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ತಮ್ಮ ಕುಲಕಸುಬನ್ನು ತೊರೆಯಲು ಕಾರಣವಾದ ಅಂಶಗಳೇನು ಎಂಬುದರ ಬಗ್ಗೆ ಸರ್ಕಾರ ಸಮೀಕ್ಷೆ ನಡೆಸಿದೆಯೇ;

(ಈ) ಮೂಲ ಕುಲಕಸುಬುದಾರರಿಗೆ ಆರ್ಥಿಕ ಯೋಜನೆಗಳನ್ನು ಪ್ರಕಟಿಸಿ ಉತ್ತೇಜಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?